CC No.16/2024
CW-8  PW-7

**ಪ್ರಧಾನ ವ್ಯವಹಾರ ನ್ಯಾಯಾಧೀಶರು ಮತ್ತು  ಜೆ.ಎಂ.ಎಫ್.ಸಿ ನ್ಯಾಯಾಲಯ, ಸೊರಬ**

**ಸಿ ಸಿ ನಂ.  16/2024**

**ಹೆಸರು** :-  **ಉಮೇಶ**

**ತಂದೆಯ ಹೆಸರು** :-  **ಬಸವಂತಪ್ಪ**

**ವಯಸ್ಸು** :-  **47 ವರ್ಷ**

**ಉದ್ಯೋಗ** :-  **ಕೂಲಿ ಕಾರ್ಮಿಕ, ಪುರಸಭೆ**

**ಸ್ಥಳ** :-  **ಸೊರಬ**

**ದಿನಾಂಕಃ 02.02.2026 ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣವಚನ ಬೋಧಿಸಲಾಯಿತು.**

**ಮುಖ್ಯ ವಿಚಾರಣೆಃ ಸಹಾಯಕ ಸರ್ಕಾರಿ ಅಭಿಯೋಜಕರವರಿಂದಃ**

ದಿಃ 22.11.2022 ರಂದು 10.30 ರ ಸಮಯದಲ್ಲಿ ಸೊರಬ ಟೌನ್ ನ ಪುಟ್ ಪಾತ್ ನಲ್ಲಿರುವ ಅಂಗಡಿಗಳನ್ನು ತೆರವುಗೊಳಿಸಲು ಹೇಳಿದ್ದು, ನಾವು ತೆರವುಗೊಳಿಸಲು ಹೋದಾಗ ಚಾಸಾ-1 ರವರು ನಮ್ಮೊಂದಿಗೆ ಇದ್ದು, ಆರೋಪಿಯು ಅವಾಚ್ಯ ಶಬ್ದಗಳಿಂದ ಬೈದಿರುತ್ತಾನೆ. ನಾವು ಅಂಗಡಿಗಳನ್ನು ತೆರವುಗೊಳಿಸಲು ಆರೋಪಿಯು ಅಡ್ಡಿಪಡಿಸಿರುತ್ತಾನೆ. ನಂತರ ನಾವು ಅಲ್ಲಿಂದ ಹೊರಟು ಬಂದಿರುತ್ತೇವೆ. ಆ ದಿನ ನಾವು ಯಾವ ವ್ಯಕ್ತಿ ಬೈದಿರುತ್ತಾನೆ ಎಂದು ನೋಡಿರುವುದಿಲ್ಲ. ನಾನು ಪೊಲೀಸರ ಮುಂದೆ ಯಾವುದೇ ಹೇಳಿಕೆ ನೀಡಿರುವುದಿಲ್ಲ.

CC No.16/2024
CW-8 PW-7

**(ಈ ಹಂತದಲ್ಲಿ ಮಾನ್ಯ ಸ.ಸ.ಅ ರವರು ಸಾಕ್ಷಿಯು ಅಭಿಯೋಜನಾ ಪ್ರಕರಣಕ್ಕೆ ಭಾಗಶಃ ಪ್ರತಿಕೂಲ ಸಾಕ್ಷಿ ನುಡಿದ ಕಾರಣ ಸಾಕ್ಷಿಯನ್ನು ಭಾಗಶಃ ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟಿ ಸವಾಲಿಗೆ ಅನುಮತಿ ಕೋರಿದ್ದು, ಸಾಕ್ಷಿಯು ಅಭಿಯೋಜನಾ ಪ್ರಕರಣಕ್ಕೆ ವ್ಯತಿರಿಕ್ತವಾಗಿ ಸಾಕ್ಷಿ ನುಡಿದ ಕಾರಣ ಪಾಟಿ ಸವಾಲಿಗೆ ಅನುಮತಿ ನೀಡಲಾಯಿತು**).

**ಪಾಟಿ ಸವಾಲುಃ ಮಾನ್ಯ ಸ.ಸ.ಅಭಿಯೋಜಕವರಿಂದಃ**

ದಿಃ 24.11.2022 ರಂದು ಚಾಸಾ-1 ರವರ ಆದೇಶದ ಮೇರೆಗೆ ಸೊರಬ ತಾಲ್ಲೂಕಿನ ಪುಟ್ ಪಾತ್ ನಲ್ಲಿರುವ ಅಂಗಡಿಗಳನ್ನು ತೆರವುಗೊಳಿಸಲು ಹೋದಾಗ ನ್ಯಾಯಾಲಯದ ಮುಂದೆ ಇರುವ ಆರೋಪಿಯು ನಮಗೆ ಮತ್ತು ಚಾಸಾ-1 ರವರು ಅವಾಚ್ಯ ಶಬ್ದಗಳಿಂದ ಬೈದು ಕರ್ತವ್ಯಕ್ಕೆ ಅಡಿಪಡಿಸಿರುತ್ತಾನೆ ಅಂದರೆ ಸರಿಯಲ್ಲ. ಆ ದಿನ ತುಂಬಾ ಜನರಿದ್ದು, ಯಾರು ಬೈದಿರುತ್ತಾರೆ ಎಂದು ನೋಡಿರುವುದಿಲ್ಲ. ದಿಃ30.11.2022 ರಂದು ನಾನು ಈಗ ಓದಿ ಹೇಳಿದಂತೆ ತನಿಖಾಧಿಕಾರಿಯವರ ಮುಂದೇ ಹೇಳಿಕೆ ನೀಡಿರುತ್ತೇನೆ ಅಂದರೆ ಸರಿಯಲ್ಲ. ಸದರಿ ಹೇಳಿಕೆಯನ್ನು ನಿಪಿ-6 ಎಂದು ಗುರುತಿಸಲಾಯಿತು.

**ಪಾಟಿ ಸವಾಲುಃ** ಆರೋಪಿ ಪರ ವಕೀಲರು ಸಾಕ್ಷಿಯ ಪಾಟಿ ಸವಾಲು ಇಲ್ಲ ಎಂದು ನುಡಿದಿದ್ದು, ಸಾಕ್ಷಿಯ ಪಾಟಿ ಸವಾಲು ಇಲ್ಲ ಎಂದು ತೆಗೆದುಕೊಳ್ಳಲಾಯಿತು.

**ಮರುವಿಚಾರಣೆ ಇಲ್ಲಃ**

**(ಸಾಕ್ಷಿಯು ಕೊಟ್ಟ ಸಾಕ್ಷ್ಯವನ್ನು ನನ್ನ ಉಕ್ತಲೇಖನದ ರೀತ್ಯಾ ಕಂಪ್ಯೂಟರೀಕರಿಸಲಾಯ್ತು).**

**ಓ.ಹೇ.ಕೇ. ಸರಿ ಇದೆ ಎಂದು ಒಪ್ಪಿದ್ದಾರೆ.**

**ಪ್ರಧಾನ ವ್ಯವಹಾರ ನ್ಯಾ ಮತ್ತು ಜೆ.ಎಂ.ಎಫ್.ಸಿ**
**ಸೊರಬ.**